ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	:	518
ಸದಸ್ಯರ ಹೆಸರು	:	ಶ್ರೀ.ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ	:	11.12.2020
ಉತ್ತರಿಸುವ ಸಚಿವರು	:	ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು

ಕ್ರ.ಸಂ	ಪ್ರಶ್ನೆಗಳು	ಉತ್ತರಗಳು
ಅ)	ಪಶುಸಂಗೋಪನಾ ಇಲಾಖೆಯಲ್ಲಿ ಪಶುವೈದ್ಯಾಧಿ ಕಾರಿಗಳ ಹುದ್ದೆಗಳು ಬಹುತೇಕ ಖಾಲಿ ಇದ್ದು, ಪ್ರಸ್ತುತ ಇರುವ ಪಶುವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು;	ಪಶುಸಂಗೋಪನಾ ಇಲಾಖೆಯಲ್ಲಿ ಪಶುವೈದ್ಯಾಧಿಕಾರಿಗಳ ಒಟ್ಟು 1602 ಹುದ್ದೆಗಳು ಮಂಜೂರಾಗಿದ್ದು, ಪ್ರಸ್ತುತ 794 ಪಶುವೈದ್ಯಾಧಿಕಾರಿಗಳು ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ.
ಆ)	ಹಿಂದಿನ ನೇಮಕಾತಿ ಪ್ರಕ್ರಿಯೆಯ ನಂತರ ಇಲ್ಲಿಯವರೆವಿಗೆ ನಿವೃತ್ತಿ/ಸ್ವಯಂ ನಿವೃತ್ತಿ/ಅಕಾಲಿಕ ಮರಣ ಹೊಂದಿ ಖಾಲಿ ಉಳಿದಿರುವ ಒಟ್ಟು ಹುದ್ದೆಗಳ ಸಂಖ್ಯೆ ಎಷ್ಟು;	ಹಿಂದಿನ ನೇಮಕಾತಿ ಪ್ರಕ್ರಿಯೆಯ ನಂತರ ಇಲ್ಲಿಯವರೆವಿಗೆ ನಿವೃತ್ತಿ/ಸ್ವಯಂ ನಿವೃತ್ತಿ/ಅಕಾಲಿಕ ಮರಣ ಹೊಂದಿ ಖಾಲಿ ಉಳಿದಿರುವ ಒಟ್ಟು ಹುದ್ದೆಗಳ ಸಂಖ್ಯೆ-808 ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಲ್ಲಿ ಖಾಲಿ ಇರುವ 639 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ವಿಶೇಷ ನೇಮಕಾತಿ ನಿಯಮಗಳ ಮುಖಾಂತರ ಭರ್ತಿ ಮಾಡುವ ಪ್ರಸ್ತಾವನೆಗೆ ಪ್ರಸ್ತುತ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ ಆರ್ಥಿಕ ಇಲಾಖೆಯು ಸಹಮತಿ ನೀಡಿರುವುದಿಲ್ಲ. ಆರ್ಥಿಕ ಇಲಾಖೆಯು ಸಹಮತಿ ನೀಡಿದ ನಂತರ ಖಾಲಿ ಇರುವ ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ಅಗತ್ಯ ಕ್ರಮವಹಿಸಲಾಗುವುದು.
ಇ)	ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ಯಾವಾಗ? (ಸಂಪೂರ್ಣ ಮಾಹಿತಿ ನೀಡುವುದು)	ಮುಂದುವರೆದು, 371 (ಜೆ) ರಡಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಖಾಲಿ ಇರುವ 61 ಪಶುವೈದ್ಯಾಧಿಕಾರಿ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಗಳನ್ನು ರಚಿಸಿ ಅಧಿಸೂಚನೆ ಹೊರಡಿಸಲಾಗಿರುತ್ತದೆ. ಆದರೆ ಆರ್ಥಿಕ ಇಲಾಖೆಯು ದಿನಾಂಕ: 06.07.2020 ರ ಸುತ್ತೋಲೆಯಲ್ಲಿ ಆರ್ಥಿಕ ನಿರ್ಬಂಧಗಳ ಹಿನ್ನಲೆಯಲ್ಲಿ 2020-21 ನೇ ಸಾಲಿನ ಆರ್ಥಿಕ ವರ್ಷದಲ್ಲಿ ಕಲ್ಯಾಣ-ಕರ್ನಾಟಕ ಭಾಗದ ಹುದ್ದೆಗಳು ಹಾಗೂ ಬ್ಯಾಕ್ ಲಾಗ್ ಹುದ್ದೆಗಳು ಸೇರಿದಂತೆ ಎಲ್ಲಾ ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವುದನ್ನು ಮುಂದಿನ ಆದೇಶದವರೆಗೆ ತಡೆಹಿಡಿಯುವಂತೆ ತಿಳಿಸಿರುತ್ತದೆ. ಆದುದರಿಂದ ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಮುಂದಿನ ಆದೇಶದವರೆಗೂ ತಡೆ ಹಿಡಿಯಲಾಗಿರುತ್ತದೆ.

ಸಂ: ಪಸಂಮೀ ಇ-194 ಪಸಸೇ 2020

(ಪ್ರಭು. ಬಿ.ಚವ್ಹಾಣ್)
ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು